**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು**

**ನ್ಯಾಯಾಲಯ, ದೇವದುರ್ಗ.**

**CC No.334/2024**

**CW -6 PW-3**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ದೇವರಾಜ |
| ತಂದೆ | ಃ | ವಿಶ್ವನಾಥ ರೆಡ್ಡಿ |
| ವಯಸ್ಸು | ಃ | 33 |
| ಉದ್ಯೋಗ | ಃ | ಚಾಲಕ |
| ವಾಸಸ್ಥಳ | ಃ | ಹಿರೇಬೂದೂರು |
| ಪ್ರಮಾಣಿಕರಿಸಿದ ದಿನಾಂಕ | ಃ | **12-02-2026** |

---

**<u>ಮುಖ್ಯ ವಿಚಾರಣೆ:-</u> ಮಾನ್ಯ ಸ.ಸ.ಅ ರವರಿಂದ**

ಪ್ರಕರಣದ ಬಗ್ಗೆ ನನಗೇನು ಗೊತ್ತಿಲ್ಲ. ಪೊಲೀಸರಿಗೆ ನಾನು ಹೇಳಿಕೆ ನೀಡಿರುವುದಿಲ್ಲ.

**(**ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.**)**

**<u>ಪಾಟೀ ಸವಾಲು:-</u> ಮಾನ್ಯ ಸ.ಸ.ಅ ರವರಿಂದ**

ದಿನಾಂಕ 07-03-2024 ರಂದು 12-00 ಗಂಟೆ ಸುಮಾರಿಗೆ ನಮ್ಮೂರಿನ ಬಸ್ಸನಗೌಡ ತಂದೆ ಶಿವರಾಜಪ್ಪ ಯಾವುದೇ ಲೈಸನ್ಸ್ ಇಲ್ಲದೆ ತನ್ನ ಕಿರಾಣಿ ಅಂಗಡಿಯಲ್ಲಿ ಮದ್ಯ ಮಾರಾಟ ಮಾಡುತ್ತಿದ್ದು ಆಗ ಪೊಲೀಸರು ದಾಳಿ ಮಾಡಿದ್ದು ಮದ್ಯ ಖರೀದಿಸಲು ಬಂದವರು ಓಡಿ ಹೋಗಿದ್ದು ಮಾರಾಟ ಮಾಡುತ್ತಿದ್ದ ವ್ಯಕ್ತಿ ಸಿಕ್ಕಿಬಿದ್ದಿದ್ದು ಆತನ ಹೆಸರು ವಿಚಾರೀಸಲಾಗಿದೆ ಬಸ್ಸನಗೌಡ ಎಂದು ತಿಳಿಸಿದ್ದು ಬಾಕ್ಸ ನಲ್ಲಿ ಇದ್ದ ಮದ್ಯದ ಪೌಚುಗಳನ್ನು ಪರಿಶೀಲನೆ ಮಾಡಲಾಗಿದೆ. 90 ಎಂ.ಎಲ್.ನ ಓ.ಸಿ ವಿಸ್ಕಿ 60 ಪೌಚುಗಳು ದೊರೆತಿದ್ದು ಅವುಗಳನ್ನು ಪಂಚರ ಸಮಕ್ಷಮ ರಾಸಾಯನಿಕ ಪರೀಕ್ಷೆಗಾಗಿ ಪ್ಯಾಕ್ ಮಾಡಿ ಪಿ.ಎಸ್.ಐ ರವರು ಠಾಣೆಗೆ ತೆಗೆದುಕೊಂಡು ಹೋಗಿದ್ದು ಆ ಕುರಿತು ಪೊಲೀಸರಿಗೆ ನಿಪಿ-2 ರಂತೆ ಹೇಳಿಕೆ ನೀಡಿರುತ್ತೇನೆ ಅಂದರೆ ಸರಿಯಲ್ಲ. ಆರೋಪಿಯೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**<u>ಪಾಟೀ ಸವಾಲು</u>:- ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

**ಮರುವಿಚಾರಣೆ:- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,

ದೇವದುರ್ಗ.